ಆಗಿರುತ್ತದೆ ಇಲ್ಲಿ 1,07,925 ಜಾನುವಾರು ಘಟಕಗಳಿವೆ ರಾಷ್ಟ್ರೀಯ ಕೃಷಿ ಆಯೋಗದ ಶಿಫಾರಸ್ಸಿನಂತೆ ಪ್ರತಿ 5000 ಜಾನುವಾರು ಘಟಕಕ್ಕೆ ಒಂದು ಪಶು ಚಿಕಿತ್ಸಾಲಯಂತೆ ಹೊಸನಗರ ತಾಲ್ಲೂಕಿನಲ್ಲಿ 22 ಪಶುವೈದ್ಯ ಸಂಸ್ಥೆಗಳು ಇರಬೇಕಿತ್ತು ಆದರೆ 21 ಸಂಸ್ಥೆಗಳಿವೆ ಇನ್ನು ಒಂದು ಕೊರತೆ ಇದ್ದು ಹೊಸದಾಗಿ ಪ್ರಾರಂಭಿಸಲು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ

ಇ) ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯಲ್ಲಿ ಪಶು ಚಿಕಿತ್ಸಾಲಯಗಳನ್ನು ಪಶು ಆಸ್ಪತ್ರೆಗಳನ್ನಾಗಿ ಮತ್ತು ಪ್ರಾಥಮಿಕ ಪಶು ಚಿಕಿತ್ಸಾಲಯಗಳನ್ನು ಪಶು ಆಸ್ಪತ್ರೆಗಳನ್ನಾಗಿ ಮತ್ತು ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳನ್ನು ಮತ್ತು ಕೃತಕ ಗರ್ಭಧಾರಣ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಕಾರ್ಯಕ್ರಮ ಇಲಾಖೆಯಲ್ಲಿದೆ ಇದಕ್ಕೆ ಯಾವ ಕಾಲಮಿತಿ ನಿಗದಿಯಾಗಿಲ್ಲ

ಈ) ಈ ಕಾರ್ಯಕ್ರಮ ಹಂತಹಂತವಾಗಿ ಮಾಡಬೇಕಾಗುತ್ತದೆ ಪಶು ಚಿಕಿತ್ಸಾಲಯಗಳನ್ನು ಪಶು ಆಸ್ಪತ್ರೆಗಳನ್ನಾಗಿ ಮೇಲ್ದರ್ಜೆಗೇರಿಸಲು ಪ್ರಸ್ತಾವನೆಗಳು, ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರ/ಕೃತಕ ಗರ್ಭಧಾರಣಾ ಕೇಂದ್ರಗಳನ್ನು ಪಶು ಚಿಕಿತ್ಸಾಲಯಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಗಳು ಬಂದಿದ್ದು, ಸರ್ಕಾರದ ಪರಿಶೀಲನೆಯಲ್ಲಿದೆ

591 (968) ಶ್ರೀ ಹಾಲಪ್ಪ ಹೆಚ್ (ಹೊಸನಗರ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊಸನಗರ ತಾಲ್ಲೂಕಿನ ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯರುಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು, (ಹುದ್ದೆವಾರು ವಿವರ ನೀಡುವುದು)?

ಇ) ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಂದಿದೆ

ಆ) ಹೊಸನಗರ ತಾಲ್ಲೂಕಿನ ಸಾರ್ವಜನಿಕ ಆಸ್ಪತ್ರೆಯಲ್ಲಿ 8 ವೈದ್ಯಾಧಿಕಾರಿಗಳ ಹುದ್ದೆ ಮಂಜೂರಾಗಿದ್ದು 4 ವೈದ್ಯಾಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ 4 ವೈದ್ಯಾಧಿಕಾರಿ ಹುದ್ದೆ ಖಾಲಿ ಇವೆ ಹುದ್ದೆವಾರು ವಿವರ ಈ ಕೆಳಕಂಡಂತಿದೆ

1 ಜನರಲ್ ಮೆಡಿಸನ್

2 ಸ್ತ್ರೀ ರೋಗ ತಜ್ಞರು

3 ಮಕ್ಕಳ ತಜ್ಞರು

4 ಅನಿಸ್ತೇಶಿಯ ತಜ್ಞರು

ಖಾಲಿ ಇರುವ ವೈದ್ಯರ ವಿವರ ಈ ಕೆಳಕಂಡಂತಿದೆ

1 ಜನರಲ್ ಸರ್ಜರಿ

2 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ

3 ಸೀನಿಯರ್ ಮೆಡಿಕಲ್ ಆಫೀಸರ್

4 ಸೀನಿಯರ್ ಮೆಡಿಕಲ್ ಆಫೀಸರ್

ಇ) ಖಾಲಿ ಇರುವ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು 3 ಭಾರಿ ನೇರ ಸಂದರ್ಶನ ಕರೆಯಲಾಗಿದ್ದರು ಸಹ ಯಾವುದೇ ಅಭ್ಯರ್ಥಿಯು ಸಂದರ್ಶನಕ್ಕೆ ಬಂದಿರುವುದಿಲ್ಲ

ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಸಲುವಾಗಿ ಖಾಯಂ ಆಗಿ 500 ವೈದ್ಯಾಧಿಕಾರಿಗಳನ್ನು ಎರಡು ಹಂತಗಳಲ್ಲಿ ವಿಶೇಷ ನೇಮಕಾತಿ ನಿಯಮಗಳ ಅಡಿ ಭರ್ತಿ ಮಾಡಲು ಅನುಮತಿ ನೀಡಿದ್ದು, ಇದರಲ್ಲಿ ಮೊದಲ ಹಂತವಾಗಿ 250 ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲು ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ ಆಯ್ಕೆ ಪಟ್ಟಿ ಪ್ರಕಟಿಸಿದ ನಂತರ 2ನೇ ಹಂತದಲ್ಲಿ 250 ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು

593(705) ಶ್ರೀ ಜಯಪ್ರಕಾಶ್ ಹೆಗ್ಡೆ ಕೆ (ಬ್ರಹ್ಮಾವರ) ಮಾನ್ಯ ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉಡುಪಿ ತಾಲ್ಲೂಕಿನಲ್ಲಿ ಪಶು ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸಲು ಉದ್ದೇಶಿಸಲಾಗಿರುವವುಗಳ ಸಂಖ್ಯೆ ಎಷ್ಟು?

ಆ) ಹಾಗಿದ್ದಲ್ಲಿ, ಮೇಲ್ದರ್ಜೆಗೇರಿಸಲು ಉದ್ದೇಶಿಸಲಾಗಿರುವವುಗಳಾವುವು? (ಕ್ಷೇತ್ರವಾರು ವಿವರ ನೀಡುವುದು)